<u>**ಕರ್ನಾಟಕ ವಿಧಾನ ಪರಿಷತ್ತು**</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2532 |
| ಸದಸ್ಯರ ಹೆಸರು | : | ಶ್ರೀ ಆರ್.ಧರ್ಮಸೇನ. |
| ಉತ್ತರಿಸುವ ದಿನಾಂಕ | : | 31-03-2021 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗಾಗಿ ಎಷ್ಟು ಹಾಸ್ಟೆಲ್‌ಗಳಿವೆ; ಎಷ್ಟು ವಿದ್ಯಾರ್ಥಿಗಳು ಆ ಹಾಸ್ಟೆಲ್‌ಗಳಲ್ಲಿ ವಾಸ್ತವ್ಯವಿದ್ದಾರೆ; | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗಾಗಿ ಒಟ್ಟು 1867 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ. ಸದರಿ ವಿದ್ಯಾರ್ಥಿನಿಲಯಗಳಲ್ಲಿ 2019-20ನೇ ಸಾಲಿನಲ್ಲಿ ಒಟ್ಟು 1,66,631 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ.<br><br>ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಒಟ್ಟು 255 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, 2019-20 ಹಾಗೂ 2020-21ನೇ ಸಾಲಿನಲ್ಲಿ ಒಟ್ಟು 37564 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ. |
| ಆ) | ಅನೇಕ ಹಾಸ್ಟೆಲ್‌ಗಳಲ್ಲಿ ಮೂಲ ಸೌಲಭ್ಯಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬಂದಿದೆ.<br>ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವ ಸಂಬಂಧ ಅಗತ್ಯವಿರುವ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಕಂಪ್ಯೂಟರ್ ಲ್ಯಾಬ್‌ಗಳಿಗೆ ಕಂಪ್ಯೂಟರ್‌ಗಳು, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲೆಗಳಿಗೆ ರೂ.33.71 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br><br>ಅಲ್ಲದೇ ರಾಜ್ಯಮಟ್ಟದಿಂದ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಕಾಯರ್ ಮ್ಯಾಟ್ರೆಸ್ ಮತ್ತು ಪಿಲ್ಲೋಗಳು, ಸಿಸಿಟಿವಿ, ಡೀಸೆಲ್ ಜನರೇಟರ್, ಜಮಖಾನ, ಜಕಾರ್ಡ್ ಬೆಡ್‌ಶೀಟ್, ಬೆಕ್ಸ್‌ಪ್ರೆಡ್, ಸ್ವೆಟರ್, ನೈಟ್ ಡ್ರೆಸ್, ಟ್ರ್ಯಾಕ್ ಸೂಟ್, ಸೊಳ್ಳೆಪರದೆ, ಶಾಲಾ ಬ್ಯಾಗುಗಳನ್ನು ಸರಬರಾಜು ಮಾಡಲಾಗಿರುತ್ತದೆ. |
| ಇ) | ರಾಜ್ಯದಲ್ಲಿ ಹೊಸದಾಗಿ ವಿಶ್ವವಿದ್ಯಾನಿಲಯಗಳು ಪ್ರಾರಂಭವಾಗಿದ್ದು ಅಲ್ಲಿನ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗಾಗಿ ಅವಶ್ಯಕವಾದ ಹಾಸ್ಟೆಲ್ ಸೌಲಭ್ಯದ ಕೊರತೆಯಿದ್ದು, ಈ ಕೊರತೆ ನೀಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 124 ಪಕವಿ 2019, ದಿನಾಂಕ:17-07-2019 ರನ್ವಯ ಆನ್ ಲೈನ್ ಮೂಲಕ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರವೇಶವನ್ನು ನೀಡಲಾಗುತ್ತಿದೆ. |

ಸಕಇ 173 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು.